**2007ರ ಕರ್ನಾಟಕ ಅಧಿನಿಯಮ ಸಂಖ್ಯೆ: 24**

(2007ರ ಆಗಸ್ಟ್ ಇಪ್ಪತ್ತೆಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2007

## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. 38ನೇ ಪ್ರಕರಣದ ತಿದ್ದುಪಡಿ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2007ರ ಅಧಿನಿಯಮ ಸಂಖ್ಯೆ:24.**–ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ 38ನೇ ಪ್ರಕರಣದ (1) ಮತ್ತು (2)ನೇ ಉಪಪ್ರಕರಣಗಳು ವಿಶ್ವವಿದ್ಯಾಲಯಗಳ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತುಗಳಿಗೆ ವಿವಿಧ ಮೂಲಗಳಿಂದ ನಾಮನಿರ್ದೇಶಿತರಾದ ಸದಸ್ಯರ ಪದಾವಧಿ ಮೊಟಕುಗೊಳಿಸುತ್ತವೆ. ಆದ್ದರಿಂದ ಸದರಿ ಪ್ರಕರಣವನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

[2007ರ ವಿಧಾನಸಭೆಯ ವಿಧೇಯಕ ಸಂಖ್ಯೆ 37]

[ಭಾರತದ ಸಂವಿಧಾನದ ಏಳನೆಯ ಅನುಸೂಚಿಯ ಮೂರನೇ ಪಟ್ಟಿಯ 25ನೇ ನಮೂದನೆಯಡಿಯಲ್ಲಿ ಬರುತ್ತದೆ. ]

**2007ರ ಕರ್ನಾಟಕ ಅಧಿನಿಯಮ ಸಂಖ್ಯೆ: 24**

(2007ರ ಆಗಸ್ಟ್ ಇಪ್ಪತ್ತೆಂಟನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2007**

(2007ರ ಆಗಸ್ಟ್ ಇಪ್ಪತ್ತೊಂದನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ವನ್ನು (2001ರ ಕರ್ನಾಟಕ ಅಧಿನಿಯಮ ಸಂಖ್ಯೆ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2007 ಎಂದು ಕರೆಯತಕ್ಕದ್ದು.

(2) ಇದು ಕೂಡಲೇ ಜಾರಿಗೆ ಬರತಕ್ಕದ್ದು.

**2. 38ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ (2001ರ ಕರ್ನಾಟಕ ಅಧಿನಿಯಮ ಸಂಖ್ಯೆ 29) 38ನೇ ಪ್ರಕರಣದಲ್ಲಿ,-

(1) (1)ನೇ ಉಪ ಪ್ರಕರಣದಲ್ಲಿ "ಅಥವಾ ಪುನಾರಚನೆ ಇವುಗಳಲ್ಲಿ ಯಾವುದು ಮೊದಲೋ ಅದು" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

(2) (2)ನೇ ಉಪ ಪ್ರಕರಣವನ್ನು ಬಿಟ್ಟು ಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ.ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

---

ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು.